ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	2325
ವಿಧಾನ ಪರಿಷತ್ತಿನ ಸದಸ್ಯರ ಹೆಸರು	:	ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್
ಉತ್ತರಿಸಬೇಕಾದ ದಿನಾಂಕ	:	29.03.2021
ಉತ್ತರಿಸಬೇಕಾದ ಸಚಿವರು	:	ಮಾನ್ಯ ಜೀವಿಪರಿಸ್ಥಿತಿ ಮತ್ತು ಪರಿಸರ ಹಾಗೂ ಪ್ರವಾಸೋದ್ಯಮ ಸಚಿವರು.

ಸಂಖ್ಯೆ	ಪ್ರಶ್ನೆ	ಉತ್ತರ
ಅ)	ಮೆ. ಭಾಗ್ಯಶ್ರೀ ಲಗಮವ್ವ ಶುಗರ್ಸ್ ಲಿ. ಬೆಕ್ಕೇರಿ ಗ್ರಾಮ, ರಾಯಭಾಗ ತಾಲ್ಲೂಕು, ಬೆಳಗಾವಿ ಜಿಲ್ಲೆ, ಇವರು ಮಾಲಿನ್ಯ ನಿಯಂತ್ರಣ ಮಂಡಳಿಯವರ ನಿಯಮಗಳನ್ನು ಉಲ್ಲಂಘಿಸಿ ಕಾರ್ಖಾನೆ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:	ಬಂದಿದೆ.
ಆ)	ಬಂದಿದ್ದಲ್ಲಿ, ಈ ಹಿಂದೆ ಕಾನೂನು ಬಾಹಿರವಾಗಿ ನಡೆಯುತ್ತಿದ್ದ ಈ ಕಾರ್ಖಾನೆಯನ್ನು ಮಾಲಿನ್ಯ ನಿಯಂತ್ರಣ ಮಂಡಳಿಯವರು ಸೀಜ್ ಮಾಡಿದ್ದರೂ ಸಹ ಅಕ್ರಮವಾಗಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:	ಕಾರ್ಖಾನೆಯು ನಿಯಮಗಳನ್ನು ಉಲ್ಲಂಘಿಸಿ ನಡೆಯುತ್ತಿರುವುದು ಪರಿವೀಕ್ಷಣಾ ವರದಿಯಿಂದ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯವರ ಗಮನಕ್ಕೆ ಬಂದಿದ್ದು, ಈ ಉದ್ದಿಮೆಗೆ ಮುಚ್ಚುವ ಮತ್ತು ಸೀಜ್ ಮಾಡುವ ಆದೇಶವನ್ನು ದಿನಾಂಕ: 02.04.2019 ರಂದು ಜಲ (ಮಾಲಿನ್ಯ ನಿವಾರಣೆ ಮತ್ತು ನಿಯಂತ್ರಣ) ಕಾಯ್ದೆ, 1974 ಮತ್ತು ವಾಯು (ಮಾಲಿನ್ಯ ನಿವಾರಣೆ ಮತ್ತು ನಿಯಂತ್ರಣ) ಕಾಯ್ದೆ, 1981 ರ ಅಡಿಯಲ್ಲಿ ನೀಡಲಾಗಿದೆ. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪ್ರಾದೇಶಿಕ ಕಛೇರಿ, ಚಿಕ್ಕೋಡಿಯವರು ಕಾರ್ಖಾನೆಯು ಅಕ್ರಮವಾಗಿ ನಡೆಸುತ್ತಿರುವುದಾಗಿ ದಿನಾಂಕ: 20.06.2019 ರಂದು ವರದಿ ನೀಡಿರುತ್ತಾರೆ.
ಇ)	ಸೀಜ್ ಮಾಡಿದ ಕಾರ್ಖಾನೆಯನ್ನು ಕಾನೂನುಬಾಹಿರವಾಗಿ ತೆರೆದು ನಡೆಸುತ್ತಿರುವ ಬಗ್ಗೆ ಮಾಲಿನ್ಯ ನಿಯಂತ್ರಣ ಮಂಡಳಿ, ಚಿಕ್ಕೋಡಿ, ಇವರು ಬೆಂಗಳೂರಿನ ಕೇಂದ್ರ ಕಛೇರಿಗೆ ವರದಿ ನೀಡಿದ್ದರೂ ಇದುವರೆಗೂ ಯಾವುದೇ ಕ್ರಮ ಕೈಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:	ಪ್ರಾದೇಶಿಕ ಕಛೇರಿ, ಚಿಕ್ಕೋಡಿ ರವರ ದಿನಾಂಕ: 20.06.2019 ರ ವರದಿಯ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ದಿನಾಂಕ: 16.07.2019 ರಂದು ಪ್ರಾದೇಶಿಕ ಕಛೇರಿ, ಚಿಕ್ಕೋಡಿ ರವರಿಗೆ ಕಾರ್ಖಾನೆಯ ವಿರುದ್ಧ ಕ್ರಿಮಿನಲ್ ಮೊಕದ್ದಮೆಯನ್ನು ದಾಖಲಿಸಲು ನಿರ್ದೇಶನ ನೀಡಿರುತ್ತದೆ.

ಈ)	ಬಂದಿದ್ದಲ್ಲಿ, ಈ ಕಾರ್ಖಾನೆಯ ವಿರುದ್ಧ ಇದುವರೆಗೂ ಯಾವ ಕ್ರಮ ಕೈಗೊಳ್ಳಲಾಗಿದೆ; ಇಲ್ಲದಿದ್ದಲ್ಲಿ, ಕ್ರಮ ಕೈಗೊಳ್ಳದೇ ಇರುವುದಕ್ಕೆ ಕಾರಣಗಳೇನು? (ಸಂಪೂರ್ಣ ವಿವರ ನೀಡುವುದು)	ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ನಿರ್ದೇಶನದ ಹಿನ್ನೆಲೆಯಲ್ಲಿ ಪ್ರಾದೇಶಿಕ ಕಛೇರಿ ಚಿಕ್ಕೋಡಿಯವರು ದಿನಾಂಕ: 24.11.2020 ರಂದು ಪರಿವೀಕ್ಷಣೆ ನಡೆಸಿ ಕಾರ್ಖಾನೆಯು 90 ದಿನಗಳಿಂದ ಸ್ಥಗಿತವಾಗಿದೆ ಎಂದು ತಿಳಿಸಿರುತ್ತಾರೆ ಹಾಗೂ ದಿನಾಂಕ: 23.03.2021 ರಂದು ಪರಿವೀಕ್ಷಣೆ ನಡೆಸಿ ಉದ್ದಿಮೆ ಸ್ಥಗಿತವಾಗಿದೆ ಎಂದು ವರದಿ ಮಾಡಿರುತ್ತಾರೆ. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ವತಿಯಿಂದ ಕಾರ್ಖಾನೆಯ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಲು ಕ್ರಮ ಕೈಗೊಳ್ಳಲಾಗುತ್ತಿದೆ.

ಸಂಖ್ಯೆ: ಅಪಜೀ 61 ಇಪಿಸಿ 2021

(ಸಿ.ಪಿ. ಯೋಗೇಶ್ವರ)
ಜೀವಿಪರಿಸ್ಥಿತಿ ಮತ್ತು ಪರಿಸರ ಹಾಗೂ
ಪ್ರವಾಸೋದ್ಯಮ ಸಚಿವರು.